ಹಾಗೂ 7 ಕೆಜಿ ಗೋಧಿ ಬಿಪಿಎಲ್ ಪಡಿತರ ಚೀಟಿ ಒಂದಕ್ಕೆ 20 ಕೆಜಿ ಅಕ್ಕಿ ಹಾಗೂ 5 ಕೆಜಿ ಗೋಧಿ ಮಾಹೆಯಾನ ವಿತರಣೆಯಾಗುತ್ತಿರುತ್ತದೆ.

ಹಳದಿ ಪಡಿತರ ಚೀಟಿ ವಿತರಣೆ :

457 (4828) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ) :– ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಡಿತರ ಚೀಟಿ ಯೋಜನೆಯನ್ನು ಸಮಗ್ರವಾಗಿ ಜಾರಿಗೆ ತರುವ ನಿಟ್ಟಿನಲ್ಲಿ ಸಮೀಕ್ಷೆ ನಡೆಸಿ ನಗರ ಪ್ರದೇಶದಲ್ಲಿ ಬಡತನ ರೇಖೆಯಿಂದ ಕೆಳಗಿರುವ ಕುಟುಂಬಗಳನ್ನು ಶೇ.30%ಕ್ಕೆ ಸೀಮಿತಗೊಳಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ ಅರ್ಹತೆ ಹೊಂದಿದ ಕುಟುಂಬಗಳಿಗೆ ಅನ್ಯಾಯವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಡತನ ಕುಟುಂಬಗಳನ್ನು ಶೇಕಡಾ 30% ನಿಗದಿಪಡಿಸಿದಲ್ಲಿ, ಸುಮಾರು 30ಕ್ಕೂ ಹೆಚ್ಚು ಕೊಳಚೆ ಪ್ರದೇಶವಿರುವ ಭದ್ರಾವತಿ ನಗರದಲ್ಲಿ ಅರ್ಹ ಕುಟುಂಬಗಳಿಗೆ ಹಳದಿ ಪಡಿತರ ಚೀಟಿ ದೊರೆಯದೆ ಅನ್ಯಾಯವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಗ್ರಾಮೀಣ/ನಗರ ಪ್ರದೇಶದಲ್ಲಿ ವಾಸಿಸುತ್ತಿರುವ ಮನೆ ಮನೆ ಸಮೀಕ್ಷೆಯಂತೆ ಅರ್ಹತೆ ಹೊಂದಿದ ಎಲ್ಲಾ ಬಡತನ ರೇಖೆ ಕೆಳಗಿನ ಕುಟುಂಬಗಳಿಗೆ ಪಡಿತರ ಚೀಟಿಯನ್ನು ನೀಡಲಾಗುವುದೆ; ಈ ಬಗ್ಗೆ ಸರ್ಕಾರದ ನಿರ್ದೇಶನವೇನು?

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ಪಡಿತರ ಚೀಟಿ ಸಮೀಕ್ಷೆ ವೇಳೆಯಲ್ಲಿ ನಗರ ಪ್ರದೇಶದಲ್ಲಿ ಬಡತನ ರೇಖೆಯಿಂದ ಕೆಳಗಿರುವ ಕುಟುಂಬಗಳನ್ನು ಶೇಕಡ 30ಕ್ಕೆ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಮೀರಬಾರದೆಂದು ನಿಗದಿಪಡಿಸಲಾಗಿರುತ್ತದೆ. ನಿಗದಿಪಡಿಸಲಾಗಿರುವ ಪ್ರಮಾಣಕ್ಕಿಂತ ಹೆಚ್ಚಿನ ಬಿಪಿಎಲ್ ಕುಟುಂಬಗಳನ್ನು ಗುರುತಿಸಿರುವ ಪ್ರದೇಶಗಳಲ್ಲಿನ ಕುಟುಂಬಗಳನ್ನು ಪುನರ್ ಸಮೀಕ್ಷಿಸಿ ಅವುಗಳ ನೈಜತೆಯನ್ನು ಪರಿಗಣಿಸಿ ಅರ್ಹ ಕುಟುಂಬಗಳೇ ಎಂದು ರುಜುವಾತಾದಲ್ಲಿ ಬಿಪಿಎಲ್ ಕುಟುಂಬಗಳೆಂದು ಪರಿಗಣಿಸಲು ಶಿಫಾರಸ್ಸು ಮಾಡಲು ಸೂಚಿಸಲಾಗಿದೆ. ನಿಗದಿತ ಪ್ರಮಾಣಕ್ಕಿಂತ ಹೆಚ್ಚಾದ ಕುಟುಂಬಗಳನ್ನು ಗುರುತಿಸಿದ್ದಲ್ಲಿ ಸಕಾರಣಗಳನ್ನು ನೀಡಬೇಕೆಂದು ಸೂಚಿಸಲಾಗಿರುತ್ತದೆ.

ಆ) ಇಲ್ಲ.

ಇ) ಇಲ್ಲ, ಈಗಾಗಲೇ ನೀಡಿರುವ ನಿರ್ದೇಶನಗಳಂತೆ ಸಮೀಕ್ಷೆ ನಡೆಸಿದ್ದಲ್ಲಿ ಯಾವುದೇ ಅನ್ಯಾಯವಾಗುವುದನ್ನು ಅವಕಾಶವಿರುವುದಿಲ್ಲ.

ಈ) ಮನೆ ಮನೆ ಸಮೀಕ್ಷೆಯಲ್ಲಿ ಅರ್ಹರಿರುವ ಎಲ್ಲಾ ಕುಟುಂಬಗಳಿಗೆ ಪಡಿತರ ಚೀಟಿಗಳನ್ನು ನೀಡಲು ಸರ್ಕಾರದ ಆದೇಶ ದಿನಾಂಕ : 10–01–2005ರಲ್ಲಿ ನಿರ್ದೇಶನ ನೀಡಲಾಗಿದೆ.

ರೈತ ಸಂಪರ್ಕ ಕೇಂದ್ರಗಳನ್ನು ಮಂಜೂರು ಮಾಡುವುದು :

5600 ಶ್ರೀ ಚಿಕ್ಕನಗೌಡ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) :– ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಲಘಟಗಿ ವಿಧಾನಸಭಾ ಕ್ಷೇತ್ರದಲ್ಲಿರುವ ರೈತ ಸಂಪರ್ಕ ಕೇಂದ್ರಗಳೆಷ್ಟು ಹಾಗೂ ಅವು ಯಾವುವು;

ಆ) ರೈತ ಸಂಪರ್ಕ ಕೇಂದ್ರಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ರೈತ ಸಂಪರ್ಕ ಕೇಂದ್ರಗಳನ್ನು ಹೊಸದಾಗಿ ತೆರೆಯುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಎಷ್ಟು ಕೇಂದ್ರಗಳನ್ನು ಮಂಜೂರು ಮಾಡಲಾಗುವುದು?

ಶ್ರೀ ಕೆ. ಶ್ರೀನಿವಾಸಗೌಡ (ಕೃಷಿ ಸಚಿವರು) :

ಅ) ಕಲಘಟಗಿ ಮತ್ತು ಹುಬ್ಬಳ್ಳಿ ತಾಲ್ಲೂಕುಗಳ ತಲಾ 3 ರೈತ ಸಂಪರ್ಕ ಕೇಂದ್ರಗಳು ಕಲಘಟಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇವೆ. ಅವುಗಳೆಂದರೆ ಕಲಘಟಗಿ ತಾಲ್ಲೂಕಿನ ಕಲಘಟಗಿ, ದುಮ್ಮವಾಡ ಮತ್ತು ತಬಕದಹೊನ್ನಳ್ಳಿ ಹಾಗೂ ಹುಬ್ಬಳ್ಳಿ ತಾಲ್ಲೂಕಿನ ಛಬ್ಬಿ ಹುಬ್ಬಳ್ಳಿ ಮತ್ತು ಶಿರಗುಪ್ಪಿ ಕೇಂದ್ರಗಳು.

ಆ) ಹೌದು.

ಇ) ಹಾಲಿ ಇರುವ ಕೇಂದ್ರಗಳಲ್ಲಿಯೇ ಸಿಬ್ಬಂದಿ ಕೊರತೆ ಇರುವುದರಿಂದ ಮತ್ತು ಇಲಾಖೆಯ ಪುನರ್ ಸಂಘಟನೆ ಕುರಿತು ವಿಷಯ ಪರಿಶೀಲನೆಯಲ್ಲಿರುವುದರಿಂದ ಹೊಸ ಕೇಂದ್ರಗಳನ್ನು ತೆರೆಯಲು ಪರಿಗಣಿಸಲಾಗುತ್ತಿಲ್ಲ.

ಈ) ಉದ್ಭವಿಸುವುದಿಲ್ಲ.